**Akashvani : Bangalore**
**National Bulletin In Kannada**
**06.09.2024 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**06.09.2024** **19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಆಂಧ್ರಪ್ರದೇಶ, ತೆಲಂಗಾಣದಲ್ಲಿ ಪ್ರವಾಹ: ಪರಿಹಾರವಾಗಿ ಕೇಂದ್ರದಿಂದ ೩ ಸಾವಿರದ ೩೦೦ ಕೋಟಿ ರೂಪಾಯಿ ಬಿಡುಗಡೆ**

**೨. ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರೊಂದಿಗೆ ಪ್ರಧಾನಿ ಸಂವಾದ**

**೩. ಕೈಗಾರಿಕಾ ವಲಯದಲ್ಲಿ ಸಕಲ ಸೌಲಭ್ಯ ಒದಗಿಸಲು ರಾಷ್ಟ್ರೀಯ ಏಕಗವಾಕ್ಷಿ ಸ್ಥಾಪನೆ**

**೪. ಪ್ಯಾರಿಸ್ ಪ್ಯಾರಾಲಿಂಪಿಕ್ಸ್: ಪುರುಷರ ಹೈಜಂಪ್ ಟಿ೬೪ ವಿಭಾಗದಲ್ಲಿ ಪ್ರವೀಣ್ ಕುಮಾರ್‌ಗೆ ಚಿನ್ನ**

**೫. ಯುಎಸ್ ಓಪನ್ ಟೆನಿಸ್: ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಫೈನಲ್ ಪ್ರವೇಶಿಸಿದ ಜಸ್ಸಿಕಾ ಪೆಗುಲಾ**

**<><*<><>*><>**

ಪ್ರವಾಹದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಆಂಧ್ರಪ್ರದೇಶ ಮತ್ತು ತೆಲಂಗಾಣ ಎರಡೂ ರಾಜ್ಯಗಳಿಗೆ ಪರಿಹಾರವಾಗಿ ೩ ಸಾವಿರದ ೩೦೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಆಂಧ್ರಪ್ರದೇಶ ರಾಜ್ಯ ಬಿಜೆಪಿ ಅಧ್ಯಕ್ಷೆ ಮತ್ತು ಲೋಕಸಭಾ ಸದಸ್ಯೆ ದಗ್ಗುಬಾಟಿ ಪುರಂದೇಶ್ವರಿ ತಿಳಿಸಿದ್ದಾರೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪುರಂದೇಶ್ವರಿ ಧನ್ಯವಾದ ತಿಳಿಸಿದ್ದಾರೆ. ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಇಂದು ವಿಜಯವಾಡದಲ್ಲಿ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಿದರು. ಬುಡಮೇರು ನಾಲೆಯ ಕಾಮಗಾರಿಯನ್ನು ಅವರು ಪರಿಶೀಲಿಸಿದರು. ವೈಮಾನಿಕ ಸಮೀಕ್ಷೆ ವೇಳೆ ಅವರು, ವಿಜಯವಾಡದಿಂದ ಕೊಳ್ಳೇರು ಕೆರೆಗೆ ನೀರು ಹರಿಸುವ ಬುಡಮೇರು ಕಾಲುವೆಯ ಪ್ರದೇಶಗಳನ್ನು ಪರಿಶೀಲಿಸಿದರು. ಜೊತೆಗೆ ಅವರು ಬಂಗಾಳ ಕೊಲ್ಲಿಯಲ್ಲಿ ಕೃಷ್ಣಾ ನದಿಯ ಸಂಗಮ ಸ್ಥಳದ ಬಳಿಯ ಪ್ರದೇಶಗಳನ್ನು ಸಹ ಪರಿಶೀಲಿಸಿದರು. ಇನ್ನೊಂದೆಡೆ, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಆಂಧ್ರಪ್ರದೇಶದಲ್ಲಿ ಪ್ರವಾಹ ಪರಿಸ್ಥಿತಿಯಿಂದಾಗಿ ೧.೮ ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಆರಂಭಿಕ ಅಂದಾಜಿನ ಪ್ರಕಾರ ಸುಮಾರು ೨ ಲಕ್ಷ ರೈತರ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದ್ದಾರೆ. ಜಕ್ಕಂಪುಡಿಯಲ್ಲಿ ಸ್ಥಳೀಯ ನಿವಾಸಿಗಳು ಮತ್ತು ರೈತರೊಂದಿಗೆ ಕೇಂದ್ರ ಸಚಿವರು ಸಂವಾದ ನಡೆಸಿದರು. ಅವರು ಎನ್‌ಡಿಆರ್‌ಎಫ್ ತಂಡಗಳು ಮತ್ತು ಅಧಿಕಾರಿಗಳೊಂದಿಗೆ ಪ್ರವಾಹ ಪರಿಸ್ಥಿತಿಯನ್ನು ಪರಿಶೀಲಿಸಿದರು. ಪ್ರವಾಹ ಪೀಡಿತ ಖಮ್ಮಮ್ ಜಿಲ್ಲೆ ಮತ್ತು ತೆಲಂಗಾಣದ ಇತರೆ ಪ್ರದೇಶಗಳಿಗೆ ಅವರು ಇಂದು ಭೇಟಿ ನೀಡಿದರು. ಇನ್ನೊಂದೆಡೆ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಭಾರಿ ಮಳೆ ಮತ್ತು ಪ್ರವಾಹವನ್ನು ಗಮನದಲ್ಲಿಟ್ಟುಕೊಂಡು, ಕೇಂದ್ರ ಹಣಕಾಸು ಸಚಿವಾಲಯ, ಪ್ರವಾಹ ಪೀಡಿತ ಜನರಿಗೆ ಸಂಪೂರ್ಣ ಬೆಂಬಲ ನೀಡುವಂತೆ ಸಾರ್ವಜನಿಕ ವಲಯದ ವಿಮಾ ಕಂಪನಿಗಳಿಗೆ

ನಿರ್ದೇಶನ ನೀಡಿದೆ. ವಿಶೇಷ ಶಿಬಿರಗಳನ್ನು ಆಯೋಜಿಸುವ ಮೂಲಕ ಮತ್ತು ಕ್ಲೈಮ್ ಪ್ರಕ್ರಿಯೆಗಳನ್ನು ಸರಾಗಗೊಳಿಸುವ ಮೂಲಕ ತ್ವರಿತ ಕ್ಲೈಮ್ ಇತ್ಯರ್ಥವನ್ನು ಖಚಿತಪಡಿಸಿಕೊಳ್ಳಲು ವಿಮಾ ಕಂಪನಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಇಟಲಿ, ಐಸ್‌ಲ್ಯಾಂಡ್, ಇಸ್ರೇಲ್‌ನ ರಾಯಭಾರಿಗಳು ಹಾಗೂ ಸೋಲೋಮನ್ ದ್ವೀಪಗಳು ಮತ್ತು ನೌರು ಗಣರಾಜ್ಯದ ಹೈಕಮೀಷನರ್‌ಗಳು ರಾಷ್ಟ್ರಪತಿ ಭವನದಲ್ಲಿಂದು ಭೇಟಿಯಾದರು. ರಾಷ್ಟ್ರಪತಿ ಅವರಿಗೆ ರಾಯಭಾರಿಗಳು ಮತ್ತು ಹೈಕಮೀಷನರ್‌ಗಳು ತಮ್ಮ ಪರಿಚಯ ಪತ್ರ ಸಲ್ಲಿಸಿದರು.

**<><*<><>*><>**

ಮಾತೃಭಾಷೆಯಲ್ಲಿ ಶಿಕ್ಷಣ ಪಡೆಯುವ ಮಹತ್ವವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಒತ್ತಿ ಹೇಳಿದರು. ಇಂದು ನವದೆಹಲಿಯ ತಮ್ಮ ನಿವಾಸದಲ್ಲಿ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪಡೆದ ಶಿಕ್ಷಕರೊಂದಿಗೆ ಸಂವಾದ ನಡೆಸಿದ ಅವರು, ರಾಷ್ಟ್ರೀಯ ಶಿಕ್ಷಣ ನೀತಿಯ ಪರಿಣಾಮಗಳ ಕುರಿತು ಚರ್ಚಿಸಿದರು. ಶಿಕ್ಷಕರು ವಿವಿಧ ಭಾಷೆಗಳಲ್ಲಿ ವಿದ್ಯಾರ್ಥಿಗಳಿಗೆ ಸ್ಥಳೀಯ ಜಾನಪದ ಸಂಸ್ಕೃತಿಯನ್ನು ಕಲಿಸಬಹುದು. ಇದರಿಂದ ವಿದ್ಯಾರ್ಥಿಗಳು ಬಹು ಭಾಷೆಗಳನ್ನು ಕಲಿಯುತ್ತಾರೆ ಎಂದು ಅವರು ಸಲಹೆ ನೀಡಿದರು. ಭಾರತದ ವೈವಿಧ್ಯತೆಯನ್ನು ಅನ್ವೇಷಿಸಲು ಶಿಕ್ಷಕರು ತಮ್ಮ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಪ್ರವಾಸಗಳಿಗೆ ಕರೆದೊಯ್ಯಬಹುದು. ಇದು ಅವರ ಕಲಿಕೆಗೆ ಸಹಾಯ ಮಾಡುತ್ತದೆ ಮತ್ತು ಅವರು ತಮ್ಮ ದೇಶದ ಬಗ್ಗೆ ಸಮಗ್ರ ರೀತಿಯಲ್ಲಿ ತಿಳಿದುಕೊಳ್ಳಲು ಸಹಾಯ ಮಾಡುತ್ತದೆ. ಜೊತೆಗೆ ಇದು ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಿದೆ ಮತ್ತು ಸ್ಥಳೀಯ ಆರ್ಥಿಕತೆಗೆ ಉತ್ತೇಜನ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

**<><*<><>*><>**

ಉದ್ಯಮ ಮತ್ತು ಕೈಗಾರಿಕಾ ವಲಯದಲ್ಲಿ ಸಕಲ ಸೌಲಭ್ಯ ಒದಗಿಸಲು ಹಾಗೂ ವಿವಿಧ ಹಂತಗಳಲ್ಲಿ ಮಂಜೂರಾತಿ ನೀಡಲು ರಾಷ್ಟ್ರೀಯ ಏಕಗವಾಕ್ಷಿ ಸ್ಥಾಪಿಸಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದೆಹಲಿಯಲ್ಲಿ ವಿವಿಧ ರಾಜ್ಯಗಳ ಕೈಗಾರಿಕಾ ಸಚಿವರ ಸಮಾವೇಶ ಉದ್ದೇಶಿಸಿ ಮಾತನಾಡಿದ ಅವರು, ಕಾರ್ಖಾನೆ ಸ್ಥಾಪನೆಗೆ ಜಮೀನು ಖರೀದಿಯಿಂದ, ತಯಾರಿಕೆ ಆರಂಭದವರೆಗಿನ ಎಲ್ಲ ಹಂತಗಳಲ್ಲಿ ವಿವಿಧ ಸೌಲಭ್ಯ ಒದಗಿಸಲು ರಾಷ್ಟ್ರೀಯ ಏಕಗವಾಕ್ಷಿ ಸ್ಥಾಪಿಸಲಾಗಿದೆ ಎಂದರು. ರಾಜ್ಯಗಳು ತಮ್ಮ ಕೈಗಾರಿಕಾ ಯೋಜನೆ ಮತ್ತು ಉದ್ಯಮ ನೀತಿಗಳನ್ನು ಈ ಏಕಗವಾಕ್ಷಿಯಲ್ಲಿ ಜೋಡಿಸಬಹುದಾಗಿದೆ. ವಿಕಸಿತ ಭಾರತ ಗುರಿಯನ್ನು ವೇಗವಾಗಿ ತಲುಪಲು ಸ್ಪರ್ಧೆ, ಸಮನ್ವಯ ಮತ್ತು ಸಹಕಾರ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯಗಳು ಕೇಂದ್ರದೊಂದಿಗೆ ಕೈಜೋಡಿಸಬೇಕು ಎಂದು ಸಚಿವ ಪಿಯೂಷ್ ಗೋಯಲ್ ಮನವಿ ಮಾಡಿದರು.

**<><*<><>*><>**

ಹರಿಯಾಣ ವಿಧಾನಸಭಾ ಚುನಾವಣೆಗೆ ಮುನ್ನ ಕುಸ್ತಿಪಟುಗಳಾದ ಬಜರಂಗ್ ಪುನಿಯಾ ಮತ್ತು ವಿನೇಶ್ ಫೋಗಟ್ ಇಂದು ಕಾಂಗ್ರೆಸ್‌ಗೆ ಸೇರ್ಪಡೆಗೊಂಡಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು

ಹರಿಯಾಣ ಕಾಂಗ್ರೆಸ್  ಉಸ್ತುವಾರಿ ದೀಪಕ್ ಬಬಾರಿಯಾ ಅವರ ಸಮ್ಮುಖದಲ್ಲಿ ಅವರನ್ನು ಪಕ್ಷಕ್ಕೆ ಸೇರ್ಪಡೆಗೊಳಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ವಿನೇಶ್ ಫೋಗಟ್, ಕಾಂಗ್ರೆಸ್ ಪಕ್ಷ ಮಹಿಳೆಯರ ಪರ ನಿಂತಿದೆ. ತಮ್ಮ ಹೋರಾಟದ ಸಮಯದಲ್ಲಿ ತಮ್ಮನ್ನು ಬೆಂಬಲಿಸಿದ್ದರಿಂದ ತಾನು ಕಾಂಗ್ರೆಸ್‌ಗೆ ಸೇರಿದ್ದೇನೆ ಎಂದು ಅವರು ಹೇಳಿದ್ದಾರೆ.

**<><*<><>*><>**

ವಕ್ಫ್ ತಿದ್ದುಪಡಿ ವಿಧೇಯಕ-೨೦೨೪ ರ ಜಂಟಿ ಸಮಿತಿಯ ಸಭೆ ಇಂದು ನವದೆಹಲಿಯಲ್ಲಿ ನಡೆಯಿತು. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಜಕಾತ್ ಫೌಂಡೇಶನ್ ಆಫ್ ಇಂಡಿಯಾ ಮತ್ತು ತೆಲಂಗಾಣ ವಕ್ಫ್ ಮಂಡಳಿಯ ಪ್ರತಿನಿಧಿಗಳು, ಸಮಿತಿಯ ಮುಂದೆ ತಮ್ಮ ಅಭಿಪ್ರಾಯಗಳನ್ನು ಮತ್ತು ಸಲಹೆಗಳನ್ನು ಮಂಡಿಸಿದರು. ಲೋಕಸಭೆ ಸಂಸದ ಜಗದಾಂಬಿಕಾ ಪಾಲ್ ಅವರ ಅಧ್ಯಕ್ಷತೆಯಲ್ಲಿ ಈ ಸಮಿತಿಯನ್ನು ರಚಿಸಲಾಗಿದೆ. ೩೧ ಸದಸ್ಯರ ಸಮಿತಿಯು, ಲೋಕಸಭೆಯಿಂದ ೨೧ ಸದಸ್ಯರು ಮತ್ತು ರಾಜ್ಯಸಭೆಯಿಂದ ೧೦ ಸದಸ್ಯರನ್ನು ಒಳಗೊಂಡಿದೆ.

**<><*<><>*><>**

ಭಾರತ ಮತ್ತು ಮಾಲ್ಡೀವ್ಸ್ ನಡುವಿನ ಐದನೇ ರಕ್ಷಣಾ ಸಹಕಾರ ಸಭೆ ಇಂದು ನವದೆಹಲಿಯಲ್ಲಿ ನಡೆಯಿತು. ರಕ್ಷಣಾ ಕಾರ್ಯದರ್ಶಿ ಗಿರಿಧರ್ ಅರಮನೆ ಅವರು ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದರೆ, ಮಾಲ್ಡೀವಿಯನ್ ನಿಯೋಗದ  ನೇತೃತ್ವ ರಕ್ಷಣಾ ಪಡೆಯ ಮುಖ್ಯಸ್ಥ ಜನರಲ್ ಎಲ್ಬ್ರಾಹಿಂ ಹಿಲ್ಮಿ ವಹಿಸಿದ್ದರು. ದ್ವಿಪಕ್ಷೀಯ ರಕ್ಷಣಾ ಸಹಕಾರಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಭೆಯಲ್ಲಿ  ಚರ್ಚಿಸಲಾಯಿತು. ಉನ್ನತ ಮಟ್ಟದ ವಿನಿಮಯ ಮತ್ತು ಸಾಮರ್ಥ್ಯ ಅಭಿವೃದ್ಧಿ ಯೋಜನೆಗಳಂತಹ ಪರಸ್ಪರ ಆಸಕ್ತಿಯ ಕ್ಷೇತ್ರಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಮುಂಬರುವ ದ್ವಿಪಕ್ಷೀಯ ಸಮಾರಂಭದಲ್ಲಿ ಭಾಗವಹಿಸುವ ಅಂಶಗಳ ಬಗ್ಗೆಯೂ ಇದೇ ವೇಳೆ ಚರ್ಚಿಸಲಾಯಿತು. ಈ ಮಾತುಕತೆಯು ಫಲಪ್ರದವಾಗಿತ್ತು. ಮುಂದಿನ ದಿನಗಳಲ್ಲಿ ಭಾರತ ಮತ್ತು ಮಾಲ್ಡೀವ್ಸ್ ನಡುವಿನ ಹಿತಾಸಕ್ತಿಗಳನ್ನು ಮುನ್ನಡೆಸುತ್ತದೆ ಹಾಗೂ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಸ್ಥಿರತೆ ಮತ್ತು ಸಮೃದ್ಧಿಯನ್ನು ತರುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧ ಸಾವಿರದ ೧೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೧೮೪ ಅಂಕಗಳು ದಾಖಲಾಗಿದೆ.  ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೭೬ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೮೬೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ  ೮೩ ರೂಪಾಯಿ ೯೫ ಪೈಸೆಯಷ್ಟಾಗಿದೆ.

**<><*<><>*><>**

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದ ಪುರುಷರ ಹೈಜಂಪ್ ಟಿ೬೪ ವಿಭಾಗದ ಫೈನಲ್‌ನಲ್ಲಿ ಭಾರತದ ಪ್ರವೀಣ್ ಕುಮಾರ್ ಚಿನ್ನದ ಪದಕ ಗೆದ್ದಿದ್ದಾರೆ. ೨.೦೮ ಮೀಟರ್ ಎತ್ತರ ಜಿಗಿಯುವ ಮೂಲಕ ಅವರ ಹೊಸ ದಾಖಲೆ ಬರೆದಿದ್ದಾರೆ. ಈ ಮೂಲಕ ಭಾರತದ ಪದಕಗಳ ಸಂಖ್ಯೆ ೨೬ಕ್ಕೆ ಏರಿಕೆಯಾಗಿದೆ.

೬ ಚಿನ್ನ, ೯ ಬೆಳ್ಳಿ ಮತ್ತು ೧೧ ಕಂಚಿನ ಪದಕಗಳನ್ನು ಇದು ಒಳಗೊಂಡಿದೆ. ಚಿನ್ನದ ಪದಕ ವಿಜೇತ ಪ್ರವೀಣ್ ಕುಮಾರ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್ಕರ್, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಅಭಿನಂದಿಸಿದ್ದಾರೆ. ಪವರ್ ಲಿಫ್ಟಿಂಗ್ ವಿಭಾಗದ ಮಹಿಳೆಯರ ೬೭ ಕೆ.ಜಿ ಫೈನಲ್‌ನಲ್ಲಿ ಕಸ್ತೂರಿ ರಾಜಮಣಿ ಸೆಣಸಲಿದ್ದಾರೆ. ಇಂದು ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಸ್ಪರ್ಧೆ ಆರಂಭವಾಗಲಿದೆ. ಮಹಿಳೆಯರ ಜಾವೆಲಿನ್ ಥ್ರೋ ಎಫ್-೪೬ ಫೈನಲ್‌ನಲ್ಲಿ ಭವನಾ ಬೆನ್ ಅಜಾಬಾಜಿ ಚೌಧರಿ ಅಖಾಡಕ್ಕಿಳಿಯಲಿದ್ದಾರೆ. ರಾತ್ರಿ ೧೦.೩೦ಕ್ಕೆ ಸ್ಪರ್ಧೆ ಆರಂಭವಾಗಲಿದೆ. ಪುರುಷರ ಶಾಟ್‌ಪುಟ್ ಫೈನಲ್‌ನಲ್ಲಿ ಸೋಮನ್ ರಾಣಾ ಮತ್ತು ಹೋಕಾಟೊ ಸೆಮ ಸ್ಪರ್ಧಿಸಲಿದ್ದಾರೆ. ಪುರುಷರ ೪೦೦ ಮೀಟರ್ ಟಿ-೪೭ ಪ್ಯಾರಾ ರನ್ ಫೈನಲ್‌ಗಾಗಿ ದಿಲೀಪ್ ಗೋವಿಟ್ ಅರ್ಹತೆ ಪಡೆದಿದ್ದಾರೆ. ಕುತೂಹಲ ಕೆರಳಿಸಿದ್ದ, ಮಹಿಳೆಯರ ೨೦೦ ಮೀಟರ್ ಟಿ-೧೨ ಸೆಮಿಫೈನಲ್‌ಗೆ ಸಿಮ್ರಾನ್ ಅರ್ಹತೆ ಪಡೆದಿದ್ದಾರೆ.

<><*<><>*><>

ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಗ್ರ್ಯಾನ್ ಸ್ಲಾಮ್ ಟೆನಿಸ್ ಟೂರ್ನಿಯ ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಜಸ್ಸಿಕಾ ಪೆಗುಲಾ ಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆದ ಸೆಮಿಫೈನಲ್ ಪಂದ್ಯದಲ್ಲಿ ಜಸ್ಸಿಕಾ ಪೆಗುಲಾ, ಝೆಕ್ ಗಣರಾಜ್ಯದ ಕೆರೊಲಿನಾ ಮುಚ್ಚೋವಾ ವಿರುದ್ಧ ೧-೬, ೬-೪, ೬-೨ ಸೆಟ್ ಅಂತರದಲ್ಲಿ ಜಯ ಸಾಧಿಸಿ ಪ್ರಶಸ್ತಿ ಹಂತಕ್ಕೆ ಮುನ್ನಡೆದರು. ಇದಕ್ಕೂ ಮುನ್ನ, ಕಳೆದ ರಾತ್ರಿ ನಡೆದ ಮತ್ತೊಂದು ಸೆಮಿಫೈನಲ್ ಪಂದ್ಯದಲ್ಲಿ ೨ನೇ ಶ್ರೇಯಾಂಕಿತೆ ಅರಿನಾ ೬-೩, ೭-೬ ನೇರ ಸೆಟ್ ಗಳಿಂದ ೧೩ನೇ ಶ್ರೇಯಾಂಕಿತೆ ಎಮ್ಮಾ ನವರ‍್ರೊ ವಿರುದ್ಧ ಗೆದ್ದು ಪ್ರಶಸ್ತಿ ಸುತ್ತಿಗೆ ಮುನ್ನಡೆದಿದ್ದಾರೆ. ಆ ಮೂಲಕ ಇದೇ ೮ ರಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಅರಿನಾ ಸಬಲೆಂಕಾ ಹಾಗು ಜಸ್ಸಿಕಾ ಪೆಗುಲಾ ಪ್ರಶಸ್ತಿಗಾಗಿ ಸೆಣಸಲಿದ್ದಾರೆ. ಈ ಮಧ್ಯೆ, ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಅಗ್ರಮಾನ್ಯ ಆಟಗಾರ ಸಿನ್ನರ್ ೬-೨, ೧-೬, ೬-೧, ೬-೪ ಸೆಟ್ ಗಳಿಂದ ಡೇನಿಯಲ್ ಮೆಡ್ವೆಡೆವ್ ವಿರುದ್ಧ ಗೆದ್ದು ಸೆಮಿಫೈನಲ್ ಪ್ರವೇಶಿಸಿದ್ದಾರೆ.

<><*<><>*><>

ಕೇಂದ್ರ ಮಾಹಿತಿ ಮತ್ತು ಪ್ರಸಾರ ಹಾಗೂ ವಿದ್ಯುನ್ಮಾನ ಮತ್ತು ಐಟಿ ಸಚಿವ ಅಶ್ವಿನಿ ವೈಷ್ಣವ್, ಟೋಕಿಯೊದಲ್ಲಿ ಜಪಾನ್‌ನ ಡಿಜಿಟಲ್ ರೂಪಾಂತರ ಸಚಿವ ಟಾರೊ ಕೊನೊ ಅವರೊಂದಿಗೆ ಭಾರತ-ಜಪಾನ್ ಡಿಜಿಟಲ್ ಸಂಬಂಧಗಳನ್ನು ಬಲಪಡಿಸುವ ಬಗ್ಗೆ ಚರ್ಚೆ ನಡೆಸಿದ್ದಾರೆ. ಉಭಯ ನಾಯಕರು ಭವಿಷ್ಯದ ತಾಂತ್ರಿಕ ಪ್ರಗತಿಯ ಮೇಲೆ ಕೇಂದ್ರೀಕರಿಸಿ, ಡಿಜಿಟಲ್ ಕ್ಷೇತ್ರದಲ್ಲಿ ಸಹಯೋಗ ಮತ್ತು ನಾವೀನ್ಯತೆಯ ಮಾರ್ಗಗಳನ್ನು ಅನ್ವೇಷಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ಕ್ಕೆ <>*><>**